ಆ) ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರ

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :- ಮಾನ್ಯ ಅಧ್ಯಕ್ಷರೆ, ದಿನಾಂಕ : 16.07.2002 ಲಿಖಿತ ಮೂಲಕ ಉತ್ತರಿಸುವ 139 ಪ್ರಶ್ನೆಗಳ ಪೈಕಿ 105 ಪ್ರಶ್ನೆಗಳಿಗೆ ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತೇನೆ.

ಅಧ್ಯಕ್ಷರು :- ಮಂಡಿಸಲಾಯಿತು.

ಶ್ರೀ ಕೆ.ಎನ್. ಸುಬ್ಬಾರೆಡ್ಡಿ :- ಬಿಲ್‌ಗೆ ಅಮೆಂಡ್‌ಮೆಂಟಾಗಬೇಕಾಗಿದೆ.

ಅಧ್ಯಕ್ಷರು :- ಆ ಬಿಲ್ ಬಂದಾಗ ತಾವು ಚರ್ಚೆ ಮಾಡಿ. ಮಂತ್ರಿಗಳು ಮೂವ್ ಮಾಡಿದಾಗ ನಾನು ಆ ವಿಷಯವನ್ನು ತೆಗೆದುಕೊಳ್ಳುತ್ತೇನೆ. ಬಿಎಸಿಯಲ್ಲಿ ಏನು ತೀರ್ಮಾನವಾಗಿದೆ ಆ ಪ್ರಕಾರ ನಾವು ಕಾರ್ಯನಿರ್ವಹಿಸೋಣ. ಬಿಲ್ ಇಲ್ಲದೆ ಇದ್ದಾಗ ಅಮೆಂಡ್‌ಮೆಂಟ್ ಮೂವ್ ಮಾಡಬೇಕೆಂದರೆ ಹೇಗೆ ? How can you move an amendment when there is no Bill before us at all ?

(3) ಚುನಾವಣಾ ಪ್ರಸ್ತಾವಗಳು

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :- ಮಾನ್ಯ ಅಧ್ಯಕ್ಷರೆ,

(ಅ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 265 (1)ನೇ ನಿಯಮದ ಅನುಸಾರವಾಗಿ ಈ ಸಭೆ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

(ಆ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 268 (1)ನೇ ನಿಯಮದ ಅನುಸಾರವಾಗಿ ಈ ಸಭೆ ಅಂದಾಜುಗಳ ಸಮಿತಿಗೆ ಹದಿನೆಂಟು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

(ಇ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 271 (1)ನೇ ನಿಯಮದ ಅನುಸಾರವಾಗಿ ಈ ಸಭೆ ಸಾರ್ವಜನಿಕ ಉದ್ದಿಮೆಗಳ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

(ಈ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 272 (1)ನೇ ನಿಯಮದ ಅನುಸಾರವಾಗಿ ಈ ಸಭೆ ಹಕ್ಕುಬಾಧ್ಯತಾ ಸಮಿತಿಗೆ ಒಂಬತ್ತು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

(ಉ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 277 (1)ನೇ ನಿಯಮದ ಅನುಸಾರವಾಗಿ ಈ ಸಭೆ ಅಧೀನ ಶಾಸನ ರಚನಾ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

(ಊ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 281 (1)ನೇ ನಿಯಮದ ಅನುಸಾರವಾಗಿ ಈ ಸಭೆ ಸರ್ಕಾರಿ ಭರವಸೆಗಳ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.